ಕರ್ನಾಟಕ ವಿಧಾನ ಸಭೆ

KARNATAKA LEGISLATIVE ASSEMBLY

ಗುರುವಾರ 16ನೇ ಏಪ್ರಿಲ್ 1998 ರಂದು

ಸದನವು ವಿಧಾನ ಸೌಧದಲ್ಲಿರುವ ವಿಧಾನಸಭೆಯ ಸಭಾಂಗಣದಲ್ಲಿ

ಬೆಳಿಗ್ಗೆ 11.00 ಗಂಟೆಗೆ ಸಮಾವೇಶಗೊಂಡಿತು.

ಉಪಾಧ್ಯಕ್ಷರು : **(ಶ್ರೀ ಚಂದ್ರಶೇಖರ್ ಎಂ. ಮಾಮನಿ)** ಅವರು

ಪೀಠವನ್ನು ಅಲಂಕರಿಸಿದ್ದರು.

ಪ್ರಶ್ನೋತ್ತರಗಳು

ಚುಕ್ಕೆ ಗುರುತಿನ ಪ್ರಶ್ನೆಗಳಿಗೆ ಬಾಯಿ ಮಾತಿನ ಮೂಲಕ ನೀಡಲಾದ ಉತ್ತರಗಳು

ಬಾಗೇಪಲ್ಲಿ ಪಟ್ಟಣಕ್ಕೆ ಕೈಗಾರಿಕಾ ಪ್ರದೇಶ

160 - ಶ್ರೀ ಜಿ.ವಿ. ಶ್ರೀರಾಮರೆಡ್ಡಿ (ಬಾಗೇಪಲ್ಲಿ) : ಮಾನ್ಯ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬಾಗೇಪಲ್ಲಿ ಪಟ್ಟಣದಲ್ಲಿ ಕೈಗಾರಿಕಾ ಪ್ರದೇಶ ನಿರ್ಮಿಸುವ ಉದ್ದೇಶ ಸರ್ಕಾರಕ್ಕಿದೆಯೇ?

ಆ) ಹಾಗಿದ್ದಲ್ಲಿ, ಈ ಬಗ್ಗೆ ಸರ್ಕಾರದವರು ಕೈಗೊಂಡಿರುವ ಕ್ರಮಗಳೇನು?

ಶ್ರೀ ಜೆ.ಹೆಚ್. ಪಟೇಲ್ (ಮುಖ್ಯಮಂತ್ರಿಗಳು) :

ಅ) ಮತ್ತು ಆ) ಕೈಗಾರಿಕಾ ಉದ್ದಿಮೆದಾರರ ಬೇಡಿಕೆ ಮತ್ತು ಅವಶ್ಯಕತೆಯನ್ನಾಧರಿಸಿ, ಸೂಕ್ತ ಸಂದರ್ಭದಲ್ಲಿ ಕೈಗಾರಿಕಾಭಿವೃದ್ಧಿ ಪ್ರದೇಶವನ್ನು ನಿರ್ಮಿಸುವ ಬಗ್ಗೆ ಪರಿಶೀಲಿಸಲಾಗುವುದು.

ಶ್ರೀ ಜಿ.ವಿ. ಶ್ರೀರಾಮರೆಡ್ಡಿ : ಮಾನ್ಯ ಉಪಾಧ್ಯಕ್ಷರೆ, ನನ್ನ ಪ್ರಶ್ನೆಗೆ 'ಪರಿಶೀಲಿಸಲಾಗುವುದೆಂದು' ಮಾಮೂಲಿಯಾದ ಉತ್ತರವನ್ನು ಕೊಟ್ಟಿದ್ದಾರೆ. ಇದು ಬಹಳ ಹಿಂದುಳಿದಿರುವ ಪ್ರದೇಶ. ಇಲ್ಲಿ ಯಾವುದೇ ರೀತಿಯಾದ ಕೈಗಾರಿಕೆಗಳು ಇಲ್ಲ. ಮಾನವ ಸಂಪನ್ಮೂಲವನ್ನು ಅಭಿವೃದ್ಧಿಪಡಿಸುವ ಯಾವುದೇ ವ್ಯವಸ್ಥೆ ಈ ಪ್ರದೇಶದಲ್ಲಿ ಇಲ್ಲ. ಆದ್ದರಿಂದ ಇಲ್ಲಿ ತಕ್ಷಣ ಕೈಗಾರಿಕಾ ಪ್ರದೇಶವನ್ನು ಅಭಿವೃದ್ಧಿ ಪಡಿಸಲು ಕ್ರಮತೆಗೆದುಕೊಳ್ಳುವ ಬಗ್ಗೆ ಮಾನ್ಯ ಸಚಿವರು ಭರವಸೆ ನೀಡಬೇಕೆಂದು ಕೇಳಿಕೊಳ್ಳುತ್ತೇನೆ

ಶ್ರೀ ಬಿ.ಎ. ಮೊಹಿದ್ದೀನ್ : ಮಾನ್ಯ ಉಪಾಧ್ಯಕ್ಷರೆ, ಅಲ್ಲಿ ಕೈಗಾರಿಕೆಯನ್ನು ಸ್ಥಾಪಿಸುವ ಬಗ್ಗೆ ಇದುವರೆಗೆ ಯಾವುದೇ ಬೇಡಿಕೆ ಬಂದಿಲ್ಲ. ಮಾನ್ಯ ಸದಸ್ಯರು ಅಲ್ಲಿ ಕೈಗಾರಿಕಾ ಎಸ್ಟೇಟನ್ನು

ಮಾಡಬೇಕೆಂದು ಕೇಳಿಕೊಂಡಿದ್ದಾರೆ. ಅಲ್ಲಿ ಏನು ಮಾಡಬೇಕು ಎಂಬ ಬಗ್ಗೆ ಅವರೊಂದಿಗೆ ಚರ್ಚೆ ಮಾಡಿ ಇದರ ಬಗ್ಗೆ ಕ್ರಮ ತೆಗೆದುಕೊಳ್ಳುತ್ತೇನೆ.

ಚಿಕ್ಕಮಗಳೂರಿನಲ್ಲಿ ನಿವೇಶನಗಳ ವಿತರಣೆ

161 - ಶ್ರೀ ಸಿ.ಆರ್. ಸಗೀರ್ ಅಹಮದ್ (ಚಿಕ್ಕಮಗಳೂರು) : ಮಾನ್ಯ ನಗರಾಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ಚಿಕ್ಕಮಗಳೂರು ನಗರಾಭಿವೃದ್ಧಿ ಪ್ರಾಧಿಕಾರವು ಹೊಸ ಬಡಾವಣೆಯನ್ನು ರಚಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?*

ಆ) *ಈ ಬಡಾವಣೆಯಲ್ಲಿ ಆರ್ಥಿಕವಾಗಿ ಹಿಂದುಳಿದವರಿಗೆ 20 X 30 ಅಡಿ ಅಳತೆಯ ನಿವೇಶನವನ್ನು ಕೊಡಲು ಉದ್ದೇಶಿಸಲಾಗಿದ್ದು, ಅಂತಹ ನಿವೇಶನಗಳ ಸಂಖ್ಯೆ ಎಷ್ಟು?*

ಇ) *ಈ ನಿವೇಶನಗಳನ್ನು ಮಾರಾಟ ಮಾಡಲು ಸರ್ಕಾರ ಅನುಮತಿ ನೀಡಿದೆಯೇ?*

ಈ) *ಈ ನಿವೇಶನಗಳನ್ನು ಆಶ್ರಯ ಯೋಜನೆಯ ಅಡಿಯಲ್ಲಿ ಪಡೆಯುವುದಕ್ಕಾಗಿ ಚಿಕ್ಕಮಗಳೂರು ಜಿಲ್ಲಾಧಿಕಾರಿಗಳು ಹಾಗೂ ಆಶ್ರಯ ಸಮಿತಿಯಿಂದ ಸರ್ಕಾರಕ್ಕೆ ಕೋರಲಾದ ಈ ನಿವೇಶನಗಳು ಆಶ್ರಯ ಸಮಿತಿಗೆ ನೀಡದೆ ಇರಲು ಕಾರಣವೇನು?*

ಶ್ರೀ ಬಿ.ಎನ್ ಬಚ್ಚೇಗೌಡ (ನಗರಾಭಿವೃದ್ಧಿ ಸಚಿವರು) :

ಅ) ಚಿಕ್ಕಮಗಳೂರು ನಗರಾಭಿವೃದ್ಧಿ ಪ್ರಾಧಿಕಾರವು ಯಾವುದೇ ಹೊಸ ಬಡಾವಣೆಯನ್ನು ರಚಿಸಿರುವುದಿಲ್ಲ. ಆದರೆ ಸರ್ಕಾರದ ಆದೇಶ ಸಂಖ್ಯೆ ವನಇ 367 ಎಂಐಬಿ 89 ದಿನಾಂಕ 27-5-91ರಲ್ಲಿ ಹಿರೇಮಗಳೂರು ವಸತಿ ಬಡಾವಣೆಗೆ ಮಂಜೂರಾತಿಯನ್ನು ನೀಡಿರುತ್ತದೆ.

ಆ) ಅಂತಹ ನಿವೇಶನಗಳ ಸಂಖ್ಯೆ 810 ಗಳಾಗಿವೆ.

ಇ) ವಸತಿ ಯೋಜನೆಗೆ ಮಂಜೂರಾತಿಯನ್ನು ನೀಡುವಾಗ ಕರ್ನಾಟಕ ನಗರಾಭಿವೃದ್ಧಿ ಪ್ರಾಧಿಕಾರಗಳ (ನಿವೇಶನ ಹಂಚಿಕೆ) ನಿಯಮಗಳು 1991ರನ್ವಯ ಆರ್ಥಿಕವಾಗಿ ಹಿಂದುಳಿದವರಿಗಾಗಿ 20 X 30 ಅಡಿ ಅಳತೆಯ ನಿವೇಶನವನ್ನು ಹಂಚಿಕೆ ಮಾಡಲು ಅನುಮತಿ ನೀಡಲಾಗಿದೆ. ಮಾರಾಟ ಮಾಡಲು ಅನುಮತಿಯನ್ನು ನೀಡಲಾಗಿರುವುದಿಲ್ಲ.

ಈ) ಪ್ರಾಧಿಕಾರವು ರಚಿಸಿದ ಒಟ್ಟು 1686 ನಿವೇಶನಗಳಲ್ಲಿ 810, 20 X 30ರ ನಿವೇಶನ -ಗಳನ್ನು ರಚಿಸಲಾಗಿದೆ. ಇವುಗಳಲ್ಲಿ ಆಶ್ರಯ ಯೋಜನೆಯ 200 ನಿವೇಶನಗಳನ್ನು ಅಂಬೇಡ್ಕರ್ ಯೋಜನೆಯ 50 ನಿವೇಶನಗಳನ್ನು ಚಿಕ್ಕಮಗಳೂರು ನಗರಸಭೆಗೆ ಮಂಜೂರು ಮಾಡಿದೆ. 560 ನಿವೇಶನಗಳಿಗೆ ಅರ್ಜಿ ಸಲ್ಲಿಸಿ ಹಣ ಪಾವತಿ ಮಾಡಿದ ಆರ್ಥಿಕವಾಗಿ ಹಿಂದುಳಿದವರಿಗೆ ಹಂಚಿಕೆ ಮಾಡಿದೆ. ಇದಕ್ಕಿಂತ ಹೆಚ್ಚು ನಿವೇಶನಗಳನ್ನು ರಚಿಸಲು ನಿಯಮಗಳಲ್ಲಿ ಅವಕಾಶವಿಲ್ಲದೆ ಇರುವುದರಿಂದ ಚಿಕ್ಕಮಗಳೂರು ಜಿಲ್ಲಾಧಿಕಾರಿಗಳಿಗೆ ಹಾಗೂ ಆಶ್ರಯ ಸಮಿತಿಗೆ ನಿವೇಶನವನ್ನು ನೀಡಲು ಸಾಧ್ಯವಾಗಿರುವುದಿಲ್ಲ.